**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ : 1 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಶಾಲಾ ಬ್ಯಾಗ್ ಹೊರೆ ತಗ್ಗಿಸುವ ಬಗ್ಗೆ.

ಓದಲಾಗಿದೆ :
1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಇವರ ಏಕ ಕಡತ ಸಂಖ್ಯೆ: ಟಿಎ-1/ಕ.ಪ.ಪು.ಸಂ/ಪ.ಪೂ.ತೂ/9/2017-18.
2. ಸರ್ಕಾರದ ಜಂಟಿಕಾರ್ಯದರ್ಶಿಗಳು ಭಾರತ ಸರ್ಕಾರ ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ:1-4/2018-IS-3. ದಿನಾಂಕ:05.10.2018,

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ(1)ರ ಏಕ ಕಡತದಲ್ಲಿ, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ದಿನಾಂಕ: 16.04.2019ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ 2019-20ನೇ ಸಾಲಿನಿಂದ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಳೆಗಳಲ್ಲಿ ಓದುತ್ತಿರುವ 1 ರಿಂದ 10ನೇ ತರಗತಿಯ ವಿದ್ಯಾರ್ಥಿಗಳ ಶಾಲಾ ಬ್ಯಾಗ್‌ನ ಹೊರೆ ತಗ್ಗಿಸುವ ಕುರಿತು ಡಿ.ಸಿ.ಆರ್.ಟಿ.ಯು Centre for child and law, NLSUI, ಬೆಂಗಳೂರು ರವರ ಸಹಯೋಗದೊಂದಿಗೆ 2016-17ನೇ ಸಾಲಿನಲ್ಲಿ Pilot Study ಯನ್ನು ಕೈಗೊಳ್ಳಲಾಗಿದ್ದು, ತಜ್ಞರ ತಂಡಗಳು ಶಾಲೆಗಳಿಗೆ ಭೇಟಿ ನೀಡಿ standardised ಪ್ರಶ್ನಾವಳಿಯನ್ನು ಬಳಸಿ ದತ್ತಾಂಶಗಳನ್ನು ವಿಶ್ಲೇಷಿಸಿ ರಾಜ್ಯದಲ್ಲಿ ಶಾಲಾ ಬ್ಯಾಗ್‌ನ ತೂಕ ಕಡಿಮೆ ಮಾಡಲು ಮಾರ್ಗದರ್ಶಿ ನಿಯಮಗಳನ್ನು ರೂಪಿಸಲಾಗಿರುತ್ತದೆ. ಅಧ್ಯಯನದನ್ವಯ ವಿದ್ಯಾರ್ಥಿಗಳು ಅವರ ದೇಹದ ತೂಕದ ಶೇ. 10 ರಿಂದ 15 ರಷ್ಟು ತೂಕದ ಪಠ್ಯಪುಸ್ತಕಗಳನ್ನು ತೆಗೆದುಕೊಂಡು ಹೋಗಬಹುದಾಗಿದೆ ಎಂಬುದಾಗಿ ಮೂಳೆ ತಜ್ಞರು ಶಿಫಾರಸ್ಸು ಮಾಡಿರುತ್ತಾರೆ. ಇದರೊಂದಿಗೆ ವಿದ್ಯಾರ್ಥಿಗಳಿಂದಲೂ ಕೂಡ ಅಭಿಪ್ರಾಯ ಸಂಗ್ರಹಿಸಲಾಗಿರುತ್ತದೆ. ಅನುದಾನರಹಿತ ಶಾಲೆಗಳ ಸಂಘಗಳ ಮುಖ್ಯಸ್ಥರ ಅಭಿಪ್ರಾಯ ಪಡೆದು ಚರ್ಚಿಸಲಾಗಿರುವ ಬಗ್ಗೆ ಸಭೆಯಲ್ಲಿ ಗಮನಸೆಳೆಯಲಾಗಿರುತ್ತದೆ. ಸದರಿ ಸಭೆಯ ನಡವಳಿಯಂತೆ ಸೂಕ್ತ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(2)ರ ಅನಧಿಕೃತ ಟಿಪ್ಪಣಿಯಲ್ಲಿ ಸರ್ಕಾರದ ಜಂಟಿಕಾರ್ಯದರ್ಶಿಗಳು ಭಾರತ ಸರ್ಕಾರ ಇವರು ವಿದ್ಯಾರ್ಥಿಗಳ ಶಾಲಾ ಬ್ಯಾಗ್ ಹೊರೆ ತಗ್ಗಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಈ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 107 ಯೋಯೋಕ 2017, ಬೆಂಗಳೂರು, ದಿನಾಂಕ: 03/05/2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನಲ್ಲಿ ರಾಜ್ಯದಾದ್ಯಂತ - ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಲ್ಲಿ 1 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಶಾಲಾ ಬ್ಯಾಗ್ ಹೊರೆ ಕಡಿಮೆ ಮಾಡಲು ಈ ಕೆಳಕಂಡ ಅಂಶಗಳಿಗೆ ಅನುಗುಣವಾಗಿ ಕ್ರಮಗಳನ್ನು ಕೈಗೊಳ್ಳವಂತೆ ಆದೇಶಿಸಿದೆ.



Scanned with CamScanner

1. ವಿದ್ಯಾರ್ಥಿಯ ಬ್ಯಾಗ್‌ನ ತೂಕವು ಆ ವಿದ್ಯಾರ್ಥಿಯ ದೇಹದ ಸರಾಸರಿ ತೂಕದ ಶೇ.10 ನ್ನು ಮೀರದಂತೆ ವಿದ್ಯಾರ್ಥಿಗಳು ಶಾಲೆಗೆ ತರುವ ಶಾಲಾ ಬ್ಯಾಗಿನ ತೂಕದ ವಿವರ ಕೆಳಗಿನಂತೆ ನಿಗದಿಪಡಿಸಲಾಗಿದೆ.

| ಕ್ರಮ ಸಂಖ್ಯೆ | ತರಗತಿ | ಶಾಲಾಬ್ಯಾಗ್ ನ ತೂಕ |
|---|---|---|
| 1. | 1–2 | 1.5–2 ಕಿ.ಗ್ರಾಂ |
| 2. | 3–5 | 2 – 3 ಕಿ.ಗ್ರಾಂ |
| 3. | 6–8 | 3 – 4 ಕಿ.ಗ್ರಾಂ |
| 4. | 9–10 | 4 – 5 ಕಿ.ಗ್ರಾಂ |

2. 1 ಮತ್ತು 2ನೇ ತರಗತಿ ವಿದ್ಯಾರ್ಥಿಗಳಿಗೆ ಮನೆಗೆಲಸ ನೀಡದಂತೆ ಕ್ರಮವಹಿಸತಕ್ಕದ್ದು,
3. ವಿದ್ಯಾರ್ಥಿಗಳಿಗೆ ಮುಂಚಿತವಾಗಿಯೇ ಆಯಾ ದಿವಸದ ವೇಳಾಪಟ್ಟಿಗೆ ಅನುಗುಣವಾಗಿ ಪಠ್ಯಪುಸ್ತಕ, ನೋಟ್ ಪುಸ್ತಕಗಳನ್ನು ಶಾಲೆಗೆ ತರಲು ಅಗತ್ಯ ಸೂಚನೆಗಳನ್ನು ನೀಡತಕ್ಕದ್ದು,
4. ಅತಿಯಾದ ಹೊರೆಯಿರುವ ಶಾಲಾ ಬ್ಯಾಗ್‌ನಿಂದ ಉಂಟಾಗಬಹುದಾದ ದುಷ್ಪರಿಣಾಮಗಳ ಬಗ್ಗೆ ಪೋಷಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಮನವರಿಕೆ ಮಾಡತಕ್ಕದ್ದು,.
5. ಕಡಿಮೆ ಖರ್ಚಿನ, ಹಗುರವಾಗಿರುವ ಹಾಗೂ ದೀರ್ಘಕಾಲ ಬಾಳಿಕೆ ಬರುವಂತಹ ಶಾಲಾ ಬ್ಯಾಗ್, ಪೆನ್ಸಿಲ್ ಕೇಸ್‌ಗಳು ಹಾಗೂ ಇನ್ನಿತರ ಲೇಖನ ಸಾಮಗ್ರಿಗಳನ್ನು ಬಳಸುವಂತೆ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸತಕ್ಕದ್ದು.
6. ಶಾಲಾ ಗ್ರಂಥಾಲಯದಲ್ಲಿ ಸಮಾನಾರ್ಥಕ ಪದಕೋಶ, ಅಟ್ಲಾಸ್, ಜ್ಞಾನವಿಜ್ಞಾನ ಕೋಶಗಳಂತಹ ಪರಾಮರ್ಶನ ಸಾಮಗ್ರಿಗಳು ಸಾಕಷ್ಟು ಸಂಖ್ಯೆಯಲ್ಲಿ ಲಭ್ಯವಾಗುವಂತೆ ಹಾಗೂ ಮಕ್ಕಳು ಇವುಗಳನ್ನು ಅವಶ್ಯಕತೆ ಇದ್ದಾಗ ಬಳಸಿಕೊಳ್ಳುವಂತೆ ವ್ಯವಸ್ಥೆಮಾಡತಕ್ಕದ್ದು..
7. ಅಭ್ಯಾಸ ಚಟುವಟಿಕೆಗಳನ್ನು ಹಾಳೆಗಳಲ್ಲಿ ಮಾಡಿಸಿ ಫೈಲ್ ಮಾಡಿಸುವುದು. ಅವಶ್ಯಕತೆ ಇದ್ದಾಗ ಪರಾಮರ್ಶಿಸಲು ಇವುಗಳನ್ನು ಶಾಲೆಗಳಲ್ಲಿಯೇ ಸಂಗ್ರಹಿಸಿಡಲು ಪ್ರೇರೇಪಿಸುವುದು ಅಥವಾ ಅಭ್ಯಾಸಪುಸ್ತಕಗಳನ್ನು ಬಳಸಿದಲ್ಲಿ ಇವುಗಳನ್ನು ಶಾಲೆಗಳಲ್ಲಿಯೇ ಸಂಗ್ರಹಿಸಿಡತಕ್ಕಸತಕ್ಕದ್ದು.
8. ವಿದ್ಯಾರ್ಥಿಯು ಮನೆಯಿಂದ ಶಾಲೆಗೆ, ಶಾಲೆಯಿಂದ ಮನೆಗೆ ತೆಗೆದುಕೊಂಡು ಹೋಗುವ ಪಠ್ಯಪುಸ್ತಕಗಳು, ನೋಟ್ ಪುಸ್ತಕಗಳು, ಲೇಖನ ಸಾಮಗ್ರಿಗಳು, ಕಲಿಕಾ ಉಪಕರಣಗಳು, ಹಾಗೂ ಇನ್ನಿತರ ವಸ್ತುಗಳನ್ನು ತರಗತಿಯೊಳಗೆ ಶೇಖರಿಸಿಡುವಂತೆ ಅಗತ್ಯ ಅನುಕೂಲತೆಗಳನ್ನು ಕಲ್ಪಿಸತಕ್ಕದ್ದು.
9. ಮಕ್ಕಳು ಶಾಲೆಗಳಿಗೆ ಕುಡಿಯುವ ನೀರನ್ನು ಕೊಂಡಯ್ಯುವುದನ್ನು ತಪ್ಪಿಸಲು ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಶಾಲೆಯಲ್ಲಿಯೇ ಕಲ್ಪಿಸತಕ್ಕದ್ದು.
10. 100 ಹಾಳೆಗಳಿಗೆ ಮೀರಿದ ನೋಟ್ ಪುಸ್ತಕಗಳನ್ನು ಶಾಲೆಯು ನಿಗದಿಗೊಳಿಸದಂತೆ ಎಚ್ಚರಿಕೆ ವಹಿಸತಕ್ಕದ್ದು.
11. ತಿಂಗಳ **3ನೇ ಶನಿವಾರವನ್ನು** ಶಾಲೆಗಳಲ್ಲಿ **"ಬ್ಯಾಗ್ ರಹಿತ ದಿನ"** ವಾಗಿ ಆಚರಿಸತಕ್ಕದ್ದು.
    ಆ ದಿನ ಶಿಕ್ಷಕರು ಪಠ್ಯಪುಸ್ತಕ ಅಥವಾ ಇತರ ಪೂರಕ ಸಾಮಗ್ರಿಗಳ ಅವಶ್ಯಕತೆ ಇಲ್ಲದೆ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳನ್ನು ತೊಡಗಿಸುವುದು. ಸಲಹಾತ್ಮಕ ಚಟುವಟಿಕೆಗಳನ್ನು ಈ ಕೆಳಕಂಡಂತೆ ನೀಡಿದೆ.

...3

Scanned with CamScanner

<u>ಶಾಲಾ ಬ್ಯಾಗ್ ರಹಿತ ದಿನದ ಚಟುವಟಿಕೆಗಳು</u>

- ಕ್ಷೇತ್ರ ಸಂಚಾರ.
- ವಾರ್ತಾಪತ್ರಿಕೆಗಳ ಚಟುವಟಿಕೆಗಳು
- ಗಣಿತದ ವಿನೋದ, ಅಬ್ಯಾಕಸ್
- ವಿಜ್ಞಾನದ ಪ್ರಯೋಗ ಮತ್ತು ಪ್ರದರ್ಶನಗಳು
- ಸಾಮಾನ್ಯ ಜ್ಞಾನ ಶೈಕ್ಷಣಿಕ ಸಂಘದ ಚಟುವಟಿಕೆಗಳು
- ಮಣ್ಣಿನಲ್ಲಿ ವಸ್ತುಗಳ ತಯಾರಿಕೆ ಇನ್ನಿತರ ಕರಕುಶಲ ಚಟುವಟಿಕೆಗಳು
- ಚಿತ್ರಕಲೆ, ಚಿತ್ರಗಳಿಗೆ ಬಣ್ಣ ತುಂಬುವ ಚಟುವಟಿಕೆ, ಕರಕುಶಲತೆ
- ಸಾಮಾಜಿಕ ಉಪಯೋಗಿತ ಉತ್ಪಾದನಾ ಕಾರ್ಯ
- ಭಕ್ತಿಗೀತೆಗಳು ಮತ್ತು ದೇಶ ಭಕ್ತಿಗೀತೆಗಳ ಚಟುವಟಿಕೆಗಳು( ಕನ್ನಡ, ಹಿಂದಿ, ಇಂಗ್ಲಿಷ್)
- ಚಿತ್ರ ಓದುವಿಕೆ (ಪಿಕ್ಟೋರಿಯಲ್ ರೀಡಿಂಗ್)/ ನಕ್ಷೆ ಓದುವಿಕೆ
- ಒಳಾಂಗಣ ಕ್ರೀಡೆಗಳು ( ಹಾವು ಮತ್ತು ಏಣಿ, ಕೇರಂ ಬೋರ್ಡ್,ಇತ್ಯಾದಿ)
- ಹೊರಾಂಗಣ ಕ್ರೀಡೆಗಳು
- ದೃಕ್ ಶ್ರವಣ ಮಾಧ್ಯಮಗಳ ಚಟುವಟಿಕೆಗಳು/ ಶ್ಲೋಕಗಳನ್ನು ಪಠಿಸುವುದು
- ನೃತ್ಯ/ ಚರ್ಚಾಸ್ಪರ್ಧೆ/ನಾಟಕ/ಏಕಪಾತ್ರಾಭಿನಯ / ಆಶುಭಾಷಣ ಸ್ಪರ್ಧೆಗಳು/ ಧ್ಯಾನ/ಯೋಗಗಳ ಚಟುವಟಿಕೆಗಳು
- ಶಾಲಾ ಪರಿಸರಕ್ಕೆ ಅನುಗುಣವಾದ ಶೈಕ್ಷಣಿಕ ಚಟುವಟಿಕೆಗಳು

ಮೇಲೆ ಹೇಳಿರುವ ಅಂಶಗಳಲ್ಲದೇ ಶಾಲಾ ಬ್ಯಾಗ್ ಹೊರೆ ಇಳಿಸಲು ಶಾಲಾ ವಾತಾವರಣಕ್ಕೆ ಅನುಗುಣವಾಗಿ ಸೂಕ್ತವಾದ ಅಭ್ಯಾಸಗಳನ್ನು ಅಳವಡಿಸಿ ಅನುಷ್ಠಾನ ಮಾಡಲು ತಿಳಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2019, ದಿನಾಂಕ:03.04.2019ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

3/5/19

(ಎಸ್.ಆರ್.ಎಸ್.ನಾಥನ್)
ವಿಶೇಷಾಧಿಕಾರಿಗಳು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಯೋಜನೆ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.

ಇವರಿಗೆ,

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

Scanned with CamScanner

ಧಾರವಾಡ ಮತ್ತು ಗುಲಬರ್ಗಾ.

2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲಬರ್ಗಾ.
3. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು ರವರಿಗೆ
4. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
5. ನಿರ್ದೇಶಕರು, ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
6. ನಿರ್ದೇಶಕರು, ಉರ್ದು ಮತ್ತು ಇತರ ಭಾಷಾ ಅಲ್ಪಸಂಖ್ಯಾತ ಶಾಲೆಗಳು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
7. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ. ಬೆಂಗಳೂರು
8. ನಿರ್ದೇಶಕರು, ಕೆ.ಎಸ್.ಇ.ಇ.ಬಿ. ಬೆಂಗಳೂರು
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು
10. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು (ಅಭಿವೃದ್ಧಿ) ಮತ್ತು ಆಡಳಿತ
11. ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ರಾಜ್ಯದ ಎಲ್ಲಾ ಶಾಲೆಗಳಿಗೆ.
12. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

<u>ಪ್ರತಿ ಮಾಹಿತಿಗಾಗಿ;</u>

1. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಬಹುಮಹಡಿ ಕಟ್ಟಡ, ಬೆಂಗಳೂರು.
3. ಅಧ್ಯಕ್ಷರು, ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ 5ನೇಹಂತ, ಬಹುಮಹಡಿಕಟ್ಟಡ ಬೆಂಗಳೂರು.(ಹೆಚ್‌ಆರ್‌ಸಿ ಸಂಖ್ಯೆ:3987/SM-393/14)
4. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಆಪ್ತ ಸಹಾಯಕ, ಶಿಕ್ಷಣ ಇಲಾಖೆ, ಬೆಂಗಳೂರು.

Scanned with CamScanner